**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ಕೇಂದ್ರ ಕಛೇರಿ : ಬೆಂಗಳೂರು**

ಸಂಖ್ಯೆ/ಕರಾಸಾ/ಕೇಕ/ವಶಾ/ಸಾಮಾನ್ಯ/93. /2017-18 ದಿನಾಂಕ: 07/08/2017.

## ಸುತ್ತೋಲೆ

ವಿಷಯ : ಅಧಿಕಾರಿ/ಸಿಬ್ಬಂದಿಗಳ ಜ್ಯೇಷ್ಠತಾ ಪಟ್ಟಿಗಳನ್ನು ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಕುರಿತು.

* * * * *

ಸಿವಿಲ್ ಅಪೀಲು ಸಂಖ್ಯೆ:2368/2011 ಮತ್ತು ಇತರ ಪ್ರಕರಣಗಳಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪು ಹಾಗೂ ಕರ್ನಾಟಕ ಸರ್ಕಾರದ ನಡವಳಿ ದಿನಾಂಕ:6/5/2017 ರನ್ವಯ ಕ.ರಾ.ರ.ಸಾ.ಸಂಸ್ಥೆಯಲ್ಲಿಯೂ ಸಹ ಅಧಿಕಾರಿ ಹಾಗು ಮೇಲ್ವಿಚಾರಕ ಸಿಬ್ಬಂದಿಗಳ ಸೇವಾ ಜ್ಯೇಷ್ಠತಾ ಪಟ್ಟಿಗಳನ್ನು ಪರಿಷ್ಕರಿಸಬೇಕಾಗಿರುತ್ತದೆ. ಅದರಂತೆ ಪರಿಷ್ಕರಣೆ ಕಾರ್ಯ ಪ್ರಗತಿಯಲ್ಲಿದ್ದು, ಅವುಗಳನ್ನು ತಯಾರಿಸಿ ಹಂತ ಹಂತವಾಗಿ ನಿಗಮದ ವೆಬ್‌ಸೈಟ್ www.ksrtc.in ನಲ್ಲಿ ಪ್ರಕಟಿಸಲಾಗುವುದು. ಆದ್ದರಿಂದ, 4 ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ ಮೇಲ್ವಿಚಾರಕ/ರಾಜ್ಯ ಮಟ್ಟದ ಮೇಲ್ವಿಚಾರಕೇತರ ವೃಂದಗಳ ಉದ್ಯೋಗಿಗಳು ಸಂಸ್ಥೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಜ್ಯೇಷ್ಠತಾ ಪಟ್ಟಿಗಳನ್ನು ಸಕಾಲದಲ್ಲಿ ಗಮನಿಸುವಂತೆ ಹಾಗು ಪ್ರಾವಿಷನಲ್ ಜ್ಯೇಷ್ಠತಾ ಪಟ್ಟಿಯಲ್ಲಿ ನಮೂದಿಸಿರುವ ಸೇವಾ ವಿವರ, ಜ್ಯೇಷ್ಠತಾ ಸ್ಥಾನ ಸ್ಥಿತಿ, ಪರಿಗಣಿತ ಅರ್ಹತಾ ದಿನಾಂಕ ಮತ್ತು ಇತರೆ ಅಂಶಗಳ ಬಗ್ಗೆ ಆಕ್ಷೇಪಣೆಗಳಿದ್ದಲ್ಲಿ, ಆಕ್ಷೇಪಣೆಗಳನ್ನು ಸಮರ್ಥಿಸುವಂತಹ ದೃಢೀಕೃತ ದಾಖಲೆಗಳೊಂದಿಗೆ ಪ್ರಾವಿಷನಲ್ ಜ್ಯೇಷ್ಠತಾ ಪಟ್ಟಿ ಪ್ರಕಟಗೊಂಡ ದಿನಾಂಕದಿಂದ 30 ದಿನಗಳೊಳಗಾಗಿ ತಮ್ಮ ಮೇಲಾಧಿಕಾರಿಗಳ ಮುಖಾಂತರ ಪ್ರಧಾನ ವ್ಯವಸ್ಥಾಪಕರು (ಸಿಬ್ಬಂದಿ), ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ ರವರಿಗೆ ಸಲ್ಲಿಸುವಂತೆ ತಿಳಿಯಪಡಿಸಿದೆ. ನಂತರ ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಮುಂದುವರೆದು, ಜ್ಯೇಷ್ಠತಾ ಪಟ್ಟಿಗಳನ್ನು ನಿಗಮದ ಅಂತರ್‌ಜಾಲತಾಣದಲ್ಲಿ ಪ್ರಕಟಿಸುತ್ತಿರುವುದರಿಂದ, ವೈಯಕ್ತಿಕವಾಗಿ ಉದ್ಯೋಗಿಗಳಿಗೆ ಜಾರಿಗೊಳಿಸಲಾಗುವುದಿಲ್ಲವೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ.

ಸದರಿ ಸುತ್ತೋಲೆಯನ್ನು ಎಲ್ಲಾ ಉದ್ಯೋಗಿಗಳ ಗಮನಕ್ಕೆ ತರುವಂತೆ ಈ ಮೂಲಕ ಸೂಚಿಸಲಾಗಿದೆ.

ಪ್ರಧಾನ ವ್ಯವಸ್ಥಾಪಕರು(ಸಿಬ್ಬಂದಿ)

**ಪ್ರತಿ ಮಾಹಿತಿಗಾಗಿ :**

1. ಅಧ್ಯಕ್ಷರು/ಉಪಾಧ್ಯಕ್ಷರು, ಕರಾರಸಾನಿಗಮ ರವರ ಆಪ್ತ ಕಾರ್ಯದರ್ಶಿಯವರಿಗೆ.
2. ವ್ಯವಸ್ಥಾಪಕ ನಿರ್ದೇಶಕರು, ಕರಾರಸಾನಿಗಮ/ಬೆಂಮಸಾಸಂಸ್ಥೆ/ವಾಕರಸಾಸಂಸ್ಥೆ/ಈಕರಸಾಸಂಸ್ಥೆ ರವರಿಗೆ.
3. ನಿರ್ದೇಶಕರು(ಸಿ:ಪ)/ನಿರ್ದೇಶಕರು(ಭ:ಜಾ), ಕರಾರಸಾನಿಗಮ ರವರಿಗೆ

**ಪ್ರತಿ ಮಾಹಿತಿ ಹಾಗು ಸೂಕ್ತ ಕ್ರಮಕ್ಕಾಗಿ.**

4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ವಿಭಾಗೀಯ ಮುಖ್ಯಸ್ಥರುಗಳು, ಕರಾರಸಾನಿಗಮ ರವರುಗಳಿಗೆ
5. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಮಸಾಸಂಸ್ಥೆ/ವಾಕರಸಾಸಂಸ್ಥೆ/ಈಕರಸಾಸಂಸ್ಥೆ ರವರಿಗೆ
6. ಮುಖ್ಯ ಭದ್ರತಾ ಮತ್ತು ಜಾಗ್ರತಾಧಿಕಾರಿ, ಕರಾರಸಾನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ಕೇಂದ್ರ ಕಛೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸುವುದು,
7. ಮುಖ್ಯ ಗಣಕ ವ್ಯವಸ್ಥಾಪಕರು, ಕರಾರಸಾನಿಗಮ ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ನಿಗಮದ ಅಧಿಕೃತ ವೆಬ್‌ಸೈಟ್ ಪ್ರಕಟಿಸುವುದು.
8. ಕಛೇರಿ ಪತ್ರ ಕಡತ